ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.27/2024-25(ಆರ್.ಪಿ.ಸಿ) ದಿನಾಂಕ: 15.04.2026

# ಪ್ರಕಟಣೆ

**ವಾಯವ್ಯ ಕರ್ನಾಟಕ ಸಾರಿಗೆ ಸಂಸ್ಥೆಯಲ್ಲಿನ ವಿವಿಧ ಗ್ರೂಪ್ ಬಿ ಹುದ್ದೆಗಳ ನೇಮಕಾತಿ ಸಂಬಂಧ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಗಳ ಪರಿಷ್ಕೃತ ಕೀ ಉತ್ತರಗಳನ್ನು ಹಾಗೂ ತಾತ್ಕಾಲಿಕ ಅಂಕಪಟ್ಟಿಯನ್ನು ಪ್ರಕಟಿಸಿರುವ ಬಗ್ಗೆ.**

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ವಾಯವ್ಯ ಕರ್ನಾಟಕ ಸಾರಿಗೆ ಸಂಸ್ಥೆಯಲ್ಲಿನ ವಿವಿಧ ಗ್ರೂಪ್ ಬಿ ಹುದ್ದೆಗಳ ನೇಮಕಾತಿ ಸಂಬಂಧ ದಿನಾಂಕ 10.04.2026 ರಂದು ನಡೆಸಿದ ಸ್ಪರ್ಧಾತ್ಮಕ ಪರೀಕ್ಷೆಗಳ ಕೀ ಉತ್ತರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ದಿನಾಂಕ 11.04.2026 ರಂದು ಪ್ರಕಟಿಸಲಾಗಿತ್ತು.

ಪ್ರಕಟಿತ ಕೀ ಉತ್ತರಗಳಿಗೆ ಆಕ್ಷೇಪಣೆಗಳಿದ್ದಲ್ಲಿ, ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ನೀಡಲಾದ ಲಿಂಕ್ ಮೂಲಕ ದಿನಾಂಕ 13.04.2026 ವರೆಗೆ ಸಲ್ಲಿಸಲು ಅವಕಾಶ ನೀಡಲಾಗಿತ್ತು.

ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರ ಸಮಿತಿಯ ಮೂಲಕ ಪರಿಶೀಲಿಸಿ, ವಿಷಯ ತಜ್ಞರ ಸಮಿತಿಯು ನೀಡಿದ ಶಿಫಾರಸ್ಸಿನಂತೆ ಪರಿಷ್ಕೃತ ಕೀ ಉತ್ತರಗಳನ್ನು ದಿನಾಂಕ 14.04.2026 ರಂದು ಪ್ರಕಟಿಸಲಾಗಿರುತ್ತದೆ.

ಅದರಂತೆ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ತಾತ್ಕಾಲಿಕ ಅಂಕಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದ್ದು, ತಾತ್ಕಾಲಿಕ ಅಂಕಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ **ದಿನಾಂಕ 17.04.2026 ಬೆಳಿಗ್ಗೆ 10.30 ರೊಳಗೆ** ನಿಗದಿತ ಲಿಂಕ್ (https://cetonline.karnataka.gov.in/kea/) ಮೂಲಕ ಪೂರಕ ದಾಖಲೆಗಳೊಂದಿಗೆ ಸಲ್ಲಿಸತಕ್ಕದ್ದು. ಪೂರಕ ದಾಖಲೆಗಳಿಲ್ಲದ ಹಾಗೂ ಕೀ ಉತ್ತರಗಳಿಗೆ ಸಲ್ಲಿಸಲಾಗುವ ಆಕ್ಷೇಪಣೆಗಳನ್ನು ಈ ಹಂತದಲ್ಲಿ ಪರಿಗಣಿಸಲಾಗುವುದಿಲ್ಲ.

ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in